**SEPTEMBER 7, 2025**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ಕೇಂದ್ರ ಸರ್ಕಾರದ ಅಧಿಸೂಚನೆ ನಂತರ ಕೃಷ್ಣಾ ಮೇಲ್ದಂಡೆ ಯೋಜನೆ–ಯುಕೆಪಿ 3 ನೇ ಹಂತದ ಕಾಮಗಾರಿಗೆ ಚಾಲನೆ– ಮುಖ್ಯಮಂತ್ರಿ.**

- **ಹಂತ, ಹಂತವಾಗಿ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆ ಸ್ಥಾಪಿಸಲು ಸರ್ಕಾರದ ಚಿಂತನೆ–ಉಪಮುಖ್ಯಮಂತ್ರಿ.**

- **ಹಾಸನದ ಸೂಪರ್ ಸ್ಪೆ ್ಶಾಲಿಟಿ ಆಸ್ಪತ್ರೆ ಸಾರ್ವಜನಿಕ ಸೇವೆ ಲಭ್ಯತೆಗೆ ಅಗತ್ಯ ಕ್ರಮ: ಜಿಲ್ಲಾ ಉಸ್ತುವಾರಿ ಸಚಿವರು.**

- **ಬಾನಂಗಳದ ವಿಸ್ಮಯ: ಇಂದು ಖಗ್ರಾಸ ಚಂದ್ರಗ್ರಹಣ: ಹಲವೆಡೆ ಗ್ರಹಣ ವೀಕ್ಷಣೆಗೆ ವ್ಯವಸ್ಥೆ.**

**ಈಗ ವಾರ್ತೆಗಳ ವಿವರ**

***********

**ಕೃಷ್ಣಾ ಮೇಲ್ದಂಡೆ ಯೋಜನೆ–ಯುಕೆಪಿ 3 ನೇ ಹಂತಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಿದ ನಂತರ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಆಲಮಟ್ಟಿ ಜಲಾಶಯದಲ್ಲಿ ತುಂಬಿದ ಕೃ ಷ್ಣೆಗೆ ಬಾಗಿನ ಅರ್ಪಿಸಿ, ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶೀಘ್ರ ಅಧಿಸೂಚನೆ ಹೊರಡಿಸುವಂತೆ, ಕೇಂದ್ರದ ಮೇಲೆ ಹಲವು ಬಾರಿ ಒತ್ತಡ ತರಲಾಗಿದೆ. ಕೃ ಷ್ಣಾ ಮೇಲ್ದಂಡೆ ಯೋಜನೆ ಮೂರನೇ ಹಂತದಲ್ಲಿ, ಆಣೆಕಟ್ಟಿನ ಎತ್ತರವನ್ನು 519.6 ಮೀಟರನಿಂದ 524.25 ಮೀಟರ್‌ಗೆ ಹೆಚ್ಚಿಸುವುದರಿಂದ 130 ಟಿಎಂಸಿ ನೀರನ್ನು ಸಂಗ್ರಹಿಸಿ, ಬಳಕೆ ಮಾಡಲು ಅನುಕೂಲವಾಗಲಿದೆ. 173 ಟಿಎಂಸಿ ನೀರನ್ನು 6.6 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರು ಒದಗಿಸಬಹುದಾಗಿದೆ. ಮೂರನೇ ಹಂತದ ಬಗ್ಗೆ ತೀರ್ಮಾನವಾಗಿದ್ದು, ಗೆಜೆಟ್ ಅಧಿಸೂಚನೆಯಾಗಿಲ್ಲ. ಇದಾದರೆ ಅಣೆಕಟ್ಟು ಎತ್ತರಿಸುವ ಕೆಲಸಕ್ಕೆ ಅನುಕೂಲವಾಗಲಿದೆ ಎಂದು ಮುಖ್ಯಮಂತ್ರಿ ಹೇಳಿದರು.**

***********

ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆ ಸ್ಥಾಪಿಸಲು ಸರ್ಕಾರ ಗುರಿ ನಿಗದಿಪಡಿಸಿಕೊಂಡಿದ್ದು, ಹಂತ, ಹಂತವಾಗಿ ಈ ಗುರಿ ಸಾಧಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹೇಳಿದ್ದಾರೆ. ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2025-26 ನೇ ಸಾಲಿನ ಬಜೆಟ್‌ನಲ್ಲಿ ಬಾಗಲಕೋಟೆ, ಮಂಗಳೂರು, ಕೋಲಾರ ನಂತರ ವಿಜಯಪುರದಲ್ಲಿಯೂ ವೈದ್ಯಕೀಯ ಕಾಲೇಜು ಸ್ಥಾಪಿಸುವ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು ಎಂದರು. ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜ್ ಸ್ಥಾಪನೆಯ ಯೋಜನೆ ಹಮ್ಮಿಕೊಂಡಿದ್ದು, ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಖಾಸಗಿ ಸಾರ್ವಜನಿಕ ಸಹಭಾಗಿತ್ವದಲ್ಲಿ ಕಾಲೇಜು ನಿರ್ಮಿಸಿ, ಸರ್ಕಾರಿ ದರದಲ್ಲಿ ಚಿಕಿತ್ಸೆ ಒದಗಿಸಲಾಗುವುದು ಎಂದು ಹೇಳಿದರು.

*******

ಪ್ರಸಕ್ತ ಸಾಲಿನ ಶೈಕ್ಷಣಿಕ ವರ್ಷಕ್ಕೆ ಅನ್ವಯವಾಗುವಂತೆ ರಾಜ್ಯಕ್ಕೆ ಒಟ್ಟು 450 ವೈದ್ಯಕೀಯ ಸೀಟುಗಳನ್ನು ರಾಷ್ಟ್ರೀಯ ವೈದ್ಯಕೀಯ ಆಯೋಗ ಹೆಚ್ಚಳ ಮಾಡಿ ಆದೇಶಿಸಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರಿಗೆ ಈ ವಿಷಯ ತಿಳಿಸಿದ ಅವರು, ಅನಿವಾಸಿ ಭಾರತೀಯರಿಗೆ 15% ಎನ್.ಆರ್.ಐ ಕೋಟಾವನ್ನು ನೀಡಲು ನಿರ್ಧರಿಸಲಾಗಿದ್ದು, ಬೆಂಗಳೂರು, ಮೈಸೂರು, ಬೆಳಗಾವಿ, ಕಲಬುರಗಿ, ಚಿಕ್ಕಬಳ್ಳಾಪುರ, ಹಾಸನ, ರಾಯಚೂರು, ವಿಜಯನಗರ ಮೆಡಿಕಲ್ ಕಾಲೇಜುಗಳಿಗೆ ಹೆಚ್ಚುವರಿಯಾಗಿ ತಲಾ 50 ಸೀಟು ಹಂಚಿಕೆಯಾಗಲಿವೆ. ಜೊತೆಗೆ ಹುಬ್ಬಳಿಯ ಮೂರು ಸಾವಿರ ಮಠದ ಮೆಡಿಕಲ್ ಕಾಲೇಜಿಗೂ ಸಹ 50 ಸೀಟು ನೀಡಲಾಗುವುದು ಎಂದರು.

*******

ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯದ ಎಲ್ಲ ಸಾರ್ವಜನಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ಕಲಬುರಗಿ ಜಿಲ್ಲೆಯಲ್ಲಿ ಜೆಸ್ಕಾಂ ವತಿಯಿಂದ ಪ್ರತಿ ಮನೆಗೂ ಯು.ಎಚ್.ಐ.ಡಿ (UHID) ಸಂಖ್ಯೆ ಸೃಷ್ಟಿಸಲು ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ಈ ಸಮೀಕ್ಷೆಯು ರಾಜ್ಯದ ಎಲ್ಲ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಅಧ್ಯಯನ ನಡೆಸಿ, ನೀತಿ ನಿರೂಪಣೆಗೆ ಆಧಾರವಾಗಿರುತ್ತದೆ. ಹೀಗಾಗಿ ಸಮೀಕ್ಷೆಯನ್ನು ಸಂಪೂರ್ಣ ಯಶಸ್ವಿಗೊಳಿಸುವುದು ಪ್ರತಿ ನಾಗರಿಕರ ಜವಾಬ್ದಾರಿಯಾಗಿದೆ ಎಂದಿದ್ದಾರೆ. ಈ ಸಂಬಂಧ ಪ್ರತಿ ಮನೆಗೂ ಸರ್ಕಾರದಿಂದ ನಿಯೋಜಿತವಾಗುವ ಗಣತಿದಾರರು ಮುಂದಿನ ದಿನಗಳಲ್ಲಿ ಮೊಬೈಲ್ ಆಪ್ ಮುಖೇನ ಸಮೀಕ್ಷೆ ಕೈಗೊಳ್ಳಲಿದ್ದು, ಸಾರ್ವಜನಿಕರು ಸೂಕ್ತ ಮಾಹಿತಿ ಒದಗಿಸಿ ಸಮೀಕ್ಷೆ ಯಶಸ್ವಿಗೊಳಿಸಬೇಕು ಎಂದು ಸಾಮಾಜಿಕ ಮಾಧ್ಯಮದ ಮೂಲಕ ಮನವಿ ಮಾಡಿದ್ದಾರೆ.

*******

ರಾಜ್ಯ ಸರ್ಕಾರ ಜಾರಿಗೊಳಿಸಿರುವ 'ಶಕ್ತಿ ಯೋಜನೆಯಡಿ ಇದುವರೆಗೆ ದಿನಕ್ಕೆ ಸರಾಸರಿ 65 ಲಕ್ಷದಂತೆ 517 ಕೋಟಿಗೂ ಅಧಿಕ ಬಾರಿ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದು, ಇದಕ್ಕಾಗಿ ಸರ್ಕಾರ 13 ಸಾವಿರ ಕೋಟಿ ಭರಿಸಿದೆ ಎಂದು ಸಾರಿಗೆ ಖಾತೆ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.

*******

ಮಿಷನ್ ವಿದ್ಯಾಕಾಶಿ ಮೂಲಕ ಜಿಲ್ಲೆಯಲ್ಲಿ ಫಲಿತಾಂಶ ಸುಧಾರಣೆ ಹಾಗೂ ಶೈಕ್ಷಣಿಕ ಗುಣಮಟ್ಟ ಹೆಚ್ಚಳಕ್ಕೆ ಜಿಲ್ಲಾಡಳಿತ ಅನೇಕ ಕಾರ್ಯಕ್ರಮಗಳನ್ನು ರೂಪಿಸಿ, ಜಾರಿಗೊಳಿಸಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ಹೇಳಿದ್ದಾರೆ. ಧಾರವಾಡದಲ್ಲಿ ಆಯೋಜನೆಗೊಂಡಿದ್ದ ಶಿಕ್ಷಕರ ದಿನಾಚರಣೆ ಮತ್ತು ಉತ್ತಮ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಈ ಸಮಾಜದಲ್ಲಿ ಶಿಕ್ಷಕರ ಬಗ್ಗೆ ಅಪಾರವಾದ ಗೌರವ, ವಿಶ್ವಾಸ ಮತ್ತು ನಂಬಿಕೆ ಇದೆ. ಶಿಕ್ಷಕರಿಂದ ನಿರೀಕ್ಷಿತ ಬದಲಾವಣೆ ಸಾಧ್ಯ. ಪ್ರತಿಯೊಬ್ಬ ಶಿಕ್ಷಕರು ಪ್ರಾಮಾಣಿಕವಾಗಿ ಪ್ರಯತ್ನ ಮಾಡಿ, ಮಕ್ಕಳ ಭವಿಷ್ಯವನ್ನು ಉತ್ತಮವಾಗಿ ರೂಪಿಸಬೇಕು ಎಂದು ಸಲಹೆ ನೀಡಿದರು.

*******

ದೇಶದ ಆರ್ಥಿಕ ಸುಧಾರಣೆಯ ನಿಟ್ಟಿನಲ್ಲಿ 'ಜಿಎಸ್‌ಟಿ ಪರಿ ್ಕರಣೆ ಕೇಂದ್ರದ ದೊಡ್ಡ ಕೊಡುಗೆ' ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಹೊಸ ಎರಡು ಹಂತದ ತೆರಿಗೆ ರಚನೆ ತೆರಿಗೆಯನ್ನು ಸರಳೀಕರಿಸಲು ಮತ್ತು ನಾಗರಿಕರ ಮೇಲಿನ ಹೊರೆಯನ್ನು ಕಡಿಮೆ ಮಾಡುವ ವಿಶಿಷ್ಟ ಪ್ರಕ್ರಿಯೆ.ಇದರಿಂದ ಬಡವರು, ಮಧ್ಯಮವರ್ಗದವರು, ಸಣ್ಣ ವ್ಯಾಪಾರಸ್ಥರು ಸೇರಿದಂತೆ ಎಲ್ಲ ವಲಯದ ಜನರಿಗೆ ಇದರಿಂದ ಉಪಯೋಗವಾಗಲಿದೆ ಎಂದಿದ್ದಾರೆ.

ಧ್ವನಿ-ಪ್ರಲ್ಹಾದ ಜೋಶಿ-50 ಸೆಕೆಂಡ್ಸ್

*******

ಈಗ ಪ್ರಕಟಣೆ.. ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

*******

ಭಾದ್ರಪದ ಮಾಸದ ಶುಕ್ಲಪಕ್ಷದ ಅನಂತನ ಹುಣ್ಣಿಮೆ ದಿನವಾದ ಇಂದು ಖಗ್ರಾಸ ಚಂದ್ರಗ್ರಹಣ ಸಂಭವಿಸಲಿದೆ. ಪ್ರಕೃತಿದತ್ತವಾಗಿ ಸಂಭವಿಸುವ ಗ್ರಹಣಗಳು ವೈಜ್ಞಾನಿಕವಾಗಿ ಖಗೋಳ ಪ್ರಕ್ರಿಯೆಗಳೆನಿಸಿದರೂ ಅವು ಪಂಚಭೂತಗಳ ಮೇಲೆ, ಅವುಗಳನ್ನು ಅವಲಂಬಿಸಿ ಬದುಕುವ ಜೀವಿಗಳ ಮೇಲೆ ಪ್ರಭಾವ ಬೀರುತ್ತವೆ ಎನ್ನುವ ನಂಬಿಕೆ ಇದೆ. ಇಂದು ಸಂಭವಿಸಲಿರುವ

ಖಗ್ರಾಸ ಚಂದ್ರಗ್ರಹಣದ ವಿಶೇ ‘ತೆ ಬಗ್ಗೆ ಪ್ರದೇಶಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಉಡುಪಿಯ ಖಗೋಳಶಾಸ್ತ್ರಜ್ಞ ಅತುಲ್ ಭಟ್.

ಅತುಲ್ ಭಟ್ ಧ್ವನಿ ---- ಸೆಕೆಂದುಗಳು

*******

ಇಂದು ಚಂದ್ರ ಗ್ರಹಣದ ಹಿನ್ನೆಲೆ, ಧಾರವಾಡ ಪ್ರಾದೇಶಿಕ ವಿಜ್ಞಾನಕೇಂದ್ರದಲ್ಲಿ, ಸಾರ್ವಜನಿಕರಿಗಾಗಿ, ದೂರದರ್ಶಕದ ಮೂಲಕ ಚಂದ್ರ ಗ್ರಹಣ ವೀಕ್ಷಿಸಲು, ರಾತ್ರಿ 11 ಗಂಟೆ 1 ನಿಮಿ ‘ದಿಂದ, 12:23 ರ ತನಕ ವ್ಯವಸ್ಥೆ ಕಲ್ಪಿಸಲಾಗಿದೆ. ಮೋಡ ಕವಿದ ವಾತಾವರಣ ಅಥವಾ ಮಳೆ ಇದ್ದಲ್ಲಿ, ಕಾರ್ಯಕ್ರಮವಿರುವುದಿಲ್ಲ ಎಂದು, ಕೇಂದ್ರದ ನಿರ್ದೇಶಕರು, ಪ್ರಟಕಣೆಯಲ್ಲಿ ತಿಳಿಸಿದ್ದಾರೆ. ಬೆಂಗಳೂರಿನ ಜವಾಹರಲಾಲ್ ನೆಹರೂ ತಾರಾಲಯ ಸೇರಿ ವಿವಿದೆಡೆ ಗ್ರಹಣ ವೀಕ್ಷಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜವಾಹರ್‌ಲಾಲ್ ನೆಹರೂ ತಾರಾಲಯದ ನಿರ್ದೇಶಕ ಬಿ.ಆರ್.ಗುರುಪ್ರಸಾದ್ ತಿಳಿಸಿದ್ದಾರೆ.

*******

ಇಂದು ಪೌರ್ಣಿಮೆಯ ದಿವಸ, ರಾಹುಗ್ರಸ್ಥ ಚಂದ್ರಗ್ರಹಣ ಇರುವುದರಿಂದ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಧಾರ್ಮಿಕ ಮತ್ತು ದತ್ತಿ ಇಲಾಖೆ ವ್ಯಾಪ್ತಿಯ ಶ್ರೀ ನಿಮಿ ಾಂಭ ದೇಗುಲದಲ್ಲಿ ದೇವರ ದರ್ಶನ ಇರುವುದಿಲ್ಲ. ಹುಣ್ಣಿಮೆ ಹಿನ್ನಲೆ, ಹೆಚ್ಚಿನ ಭಕ್ತರು ದೇಗುಲಕ್ಕೆ ಆಗಮಿಸುವುದರಿಂದ ಮಧ್ಯಾಹ್ನ 12 ಗಂಟೆಯವರೆಗೆ ಮಾತ್ರ ದೇಗುಲ ತೆರೆದಿರುತ್ತದೆ. ಆ ಬಳಿಕ ದೇಗುಲದಲ್ಲಿ ಭಕ್ತರಿಗೆ ದೇವರ ದರ್ಶನಕ್ಕೆ ಅವಕಾಶ ಇರುವುದಿಲ್ಲ ಎಂದು ದೇಗುಲದ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಕೇಂದ್ರ ಸರ್ಕಾರದ ಅಧಿಸೂಚನೆ ನಂತರ ಕೃಷ್ಣಾ ಮೇಲ್ದಂಡೆ ಯೋಜನೆ-ಯುಕೆಪಿ 3 ನೇ ಹಂತದ ಕಾಮಗಾರಿಗೆ ಚಾಲನೆ- ಮುಖ್ಯಮಂತ್ರಿ.

ಹಂತ, ಹಂತವಾಗಿ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆ ಸ್ಥಾಪಿಸಲು ಸರ್ಕಾರದ ಚಿಂತನೆ- ಉಪಮುಖ್ಯಮಂತ್ರಿ.

ಹಾಸನದ ಸೂಪರ್ ಸ್ಪೆ ಾಲಿಟಿ ಆಸ್ಪತ್ರೆ ಸಾರ್ವಜನಿಕ ಸೇವೆ ಲಭ್ಯತೆಗೆ ಅಗತ್ಯ ಕ್ರಮ: ಜಿಲ್ಲಾ ಉಸ್ತುವಾರಿ ಸಚಿವರು.

ಬಾನಂಗಳದ ವಿಸ್ಮಯ: ಇಂದು ಖಗ್ರಾಸ ಚಂದ್ರಗ್ರಹಣ: ಹಲವೆಡೆ ಗ್ರಹಣ ವೀಕ್ಷಣೆಗೆ ವ್ಯವಸ್ಥೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********